(ಇಂದು ದಿನಾಂಕಃ 14-02-2025 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಭೋದಿಸಲಾಯಿತು)

**ಪಾಟೀ ಸವಾಲು ಶ್ರೀ ವಿ.ಎನ್.ಎಮ್ ಎದುರುದಾರ ಪರ ವಕೀಲರಿಂದಃ**

1. ಅಪಘಾತ ಆಗಿ 5 ವರ್ಷ ಆಗಿದೆ. ಅಪಘಾತ ಚೌಕಿ ತಾಂಡಾದಲ್ಲಿ ಆಗಿದೆ. ನಾನು ನಡೆಸುತ್ತಿದ್ದ ಗಾಡಿ ಸಂಖ್ಯೆ ನನಗೆ ಗೊತ್ತಿಲ್ಲ. ನಾನು ನನ್ನ ಗಾಡಿ ಮೇಲೆ ಹೋಗುತ್ತಿದ್ದು ಎದುರುಗಡೆಯಿಂದ ಬಂದು ಡಿಕ್ಕಿ ಪಡೆಸಿರುತ್ತೆದೆ. ನನ್ನ ಚಾಲನಾ ಪರವಾನಿಗೆ ಇರುವುದಿಲ್ಲ. ನನ್ನ ಚಾಲನಾ ಪರವಾನಿಗೆ ಇರಲಿಲ್ಲ ನನಗೆ ಗಾಡಿ ನಡೆಸಲು ಬರುವುದಿಲ್ಲ ನಾನೇ ಅಡ್ಡಾ ದಿಡ್ಡಿ ಓಡಿಸಿಕೊಂಡು ಹೋಗಿ ಸದರಿ ಅಪಘಾತ ನನ್ನ ತಪಿಪನಿಂದ ಆಗಿದೆ ಎಂದರೆ ಸರಿಯಲ್ಲ. ಸದರಿ ಅಪಘಾತ ನನ್ನ ತಪಿಪನಿಂದ ಆಗಿದ್ದರು ಸಹ ಮೋಟರ ಸೈಕಲ ನಂಬರ ಕೆ ಎ 32 ಇ ಎಮ 9005 ವಾಹನದ ವಿರುದ್ದ 13 ದಿನಗಳು ತಡಮಾಡಿ ನಾನು ಸುಳ್ಳು ದೂರು ದಾಖಲಿಸಿರುತ್ತೇನೆ ಎಂದರೆ ಸಾಕ್ಷಿ ನನ್ನ ತಪ್ಪು ಇರುವುದಿಲ್ಲ ಅವರೆ ಬಂದು ಅಪಘಾತ ಪಡಿಸಿರುತ್ತಾರೆ ಎಂದು ಹೇಳುತ್ತಾರೆ. ಅಪಘಾತ ಆದ ನಂತರ ನಾನು ಚಿಂಚೋಳಿಯ ಸರಕಾರಿ ಆಸ್ಪತ್ರೆಗೆ ಹೋಗಿದ್ದೆ. ನಾನು ಚಿಂಚೋಳಿಯ ಸರಕಾರಿ ಆಸ್ಪತ್ರೆಗೆ ಹೋಗಿದ್ದೇನೆ ಎಂದು ತೋರಿಸಲು ಯಾವ ದಾಖಲೆ ಸಲ್ಲಿಸಿರುತ್ತೇನೆ ಎಂದರೆ ಸಾಕ್ಷಿ ಅಲ್ಲಿ ಏನು ಆಯಿತು ಎಂದು ನನಗೆ ಗೊತ್ತಿಲ್ಲ, ನನ್ನನ್ನು ಬೀದರ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ ಎಂದು ಹೇಳುತ್ತಾರೆ. ನಾನು ಸಲ್ಲಿಸಿದ ದಾಖಲೆ ಪ್ರಕಾರ ದಿಃ 14-09-2020 ರಂದು ಆಸ್ಪತ್ರೆಗೆ ಹೋಗಿದ್ದೆ ಎಂದರೆ ಸರಿ.ದಿಃ 13-09-2020 ರಂದು ನಾನು ಯಾವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ ಎಂದು ತೋರಿಸಲು ಯಾವ ದಾಖಲೆ

ಸಲ್ಲಿಸಿರುತ್ತೇನೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ನಾನು ಆಸ್ಪತ್ರೆಗೆ ಹೋಗಿ ಕೇಳಿಲ್ಲ ಎಂದು ನುಡಿಯುತ್ತಾರೆ. ನಾನು ವಾಸು ಆಸ್ಪತ್ರೆಯಲ್ಲಿ 4 ದಿನ ಚಿಕಿತ್ಸೆ ಪಡೆದಿರುತ್ತೇನೆ. ನಾನು ವಾಸು ಆಸ್ಪತ್ರೆಯಲ್ಲಿ 3 ದಿನ ಚಿಕಿತ್ಸೆ ಪಡೆದಿರುತ್ತೇನೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ನನ್ನ ಜೊತೆಯಲ್ಲಿ ಗಾಡಿಯ ಮೇಲೆ ಯಾರು ಇದ್ದರು ಎಂದು ನಾನು ಬರೆದಿಲ್ಲ ಎಂದರೆ ಸರಿ. ನನಗೆ ಸಂಪೂರ್ಣ ಗುಣ ಆದ ನಂತರ ನನಗೆ ಆಸ್ಪತ್ರೆಯಿಂದ ಬಿಡುಗಡೆ ಮಾಡಿರುತ್ತಾರೆ ಎಂದರೆ ಸರಿ. ನಾನು ಆಸ್ಪತ್ರೆಯ ಚಿಕಿತ್ಸೆಗಾಗಿ ಹಣ ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ದಾಖಲೆಗಳನ್ನು ಸೃಷ್ಟಿಸಿರುತ್ತೆನೆ ಎಂದರೆ ಸರಿಯಲ್ಲ. ನಿ.ಪಿ-12 ಮೂಲ ಪ್ರತಿ ಇರುವುದಿಲ್ಲ. ನಾನು ಬೇರೆ ಕಡೆ ಈಗಾಗಲೆ ಪರಿಹಾರದ ಹಣ ಪಡೆದಿದ್ದರಿದ ಮೂಲ ದಾಖಲೆಗಳನ್ನು ಸಲ್ಲಿಸಿಲ್ಲ ಎಂದರೆ ಸಾಕ್ಷಿ ಯಾವುದೇ ಉತ್ತರ ಕೊಡುವುದಿಲ್ಲ. ನಾನು ನನ್ನ ಅರ್ಜಿಯಲ್ಲಿ ನಾನು ಬೇರೆ ಪರಿಹಾರದ ಹಣ ಪಡೆದಿಲ್ಲ ಎಂದು ಬರೆದಿಲ್ಲ ಎಂದರೆ ಸಾಕ್ಷಿ ಅದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ.

2. ನನಗೆ ಈಗ 55 ವರ್ಷ ಇರುತ್ತದೆ. ಅಪಘಾತವಾದಗ ನನಗೆ 45 ವರ್ಷ ಎಂದು ಹೇಳುತ್ತಾರೆ. ನನ್ನ ಆರ್ಧಾರ ಕಾರ್ಡ ಇರುತ್ತದೆ ನಾನು ಅದನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ. ಅಪಘಾತವಾದಗ ನನಗೆ 46 ವರ್ಷ ವಯಸ್ಸಾಗಿತ್ತು ಎಂದರೆ ಸರಿ. ನಾನು ಅಪಘಾತದ ಸಮಯದಲ್ಲಿ ಗೌಂಡಿ ಕೆಲಸ ಮಾಡುತ್ತಿದ್ದು ತಿಂಗಳಿಗೆ 20 ಸಾವಿರ ಗಳಿಸೂತ್ತಿದ್ದೆ. ಪ್ರತಿದಿನಕ್ಕೆ ರೂ.6 ರಿಂದ 7 ನೂರು ಗಳಿಸುತ್ತಿದ್ದೆ. ನಾನು ಈಗ ಯಾವುದೆ ಕೆಲಸ ಮಾಡುವುದಿಲ್ಲ. ನಾನು ಅಪಘಾತದ ಸಮಯದಲ್ಲಿ ಗೌಂಡಿ ಕೆಲಸ ಮಾಡುತ್ತಿದ್ದು ತಿಂಗಳಿಗೆ 20 ಸಾವಿರ ಗಳಿಸೂತ್ತಿದ್ದೆ

ಎಂದು ಸುಳ್ಳು ಹೇಳುತಿದ್ದೇನೆ ಎಂದರೆ ಸರಿಯಲ್ಲ. ನಾನು ಕಲಬುರಗಿ ಆಸ್ಪತ್ರೆಗೆ ಹೋಗಿದ್ದು ಅದರ ಹೆಸರು ನನಗೆ ಗೊತ್ತಿಲ್ಲ. ನನ್ನ ತಪ್ಪಿನಿಂದ ಅಪಘಾತ ಆಗಿದ್ದರು ಸಹ ನಾನು ಈ ಸುಳ್ಳು ಅರ್ಜಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಹೆಚ್ಚಿನ ಅಂಗನ್ಯೂನ್ಯತೆ ತೋರಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪರಿಹಾರದ ಹಣ ಪಡೆಯಲು ಸುಳ್ಳು ಅರ್ಜಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ, ಚಿಂಚೋಳಿ.